**Akashvani : Bangalore**
**Regional Bulletin In Kannada**
**04.04.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**04.04.2025 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಮೈಸೂರು ವಿಮಾನ ನಿಲ್ದಾಣ ರನ್ ವೇ ಅಭಿವೃದ್ಧಿ; ಕೇಂದ್ರ ವಿಮಾನಯಾನ ಸಚಿವರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ**

**೨. ವಿಧಾನಪರಿಷತ್‌ಗೆ ನಾಲ್ವರು ಕಾಂಗ್ರೆಸ್ ಸದಸ್ಯರ ನಾಮನಿರ್ದೇಶನ; ವರಿಷ್ಠರೊಂದಿಗೆ ಚರ್ಚಿಸಿ ತೀರ್ಮಾನ**

**೩. ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಳೆ ಕಾರವಾರ ನೌಕಾನೆಲೆಗೆ ಭೇಟಿ**

**೪. ಭಾರತದ ಔಷಧ ಉತ್ಪನ್ನಗಳಿಗೆ ಅಮೆರಿಕದಿಂದ ಸುಂಕ ವಿನಾಯಿತಿ; ರಾಜ್ಯದ ಉದ್ಯಮಿಯಿಂದ ಸ್ವಾಗತ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿ ಇಂದು ಕೇಂದ್ರ ನಾಗರಿಕ ವಿಮಾನ ಯಾನ ಸಚಿವ ಕಿಂಜರಾಪು ರಾಮಮೋಹನ ನಾಯ್ಡು ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ, ಮೈಸೂರು, ಕಲಬುರಗಿ, ವಿಜಯಪುರ ವಿಮಾನ ನಿಲ್ದಾಣಗಳ ಅಭಿವೃದ್ಧಿ ಕುರಿತು ಚರ್ಚೆ ನಡೆಸಿದರು. ಮೈಸೂರು ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದೊಂದಿಗೆ ರಾಜ್ಯ ಸರ್ಕಾರ ೨೦೦೫ ರಂದು ಒಪ್ಪಂದ ಮಾಡಿಕೊಂಡಿದೆ. ಅದರಂತೆ, ಮೈಸೂರು ವಿಮಾನ ನಿಲ್ದಾಣದ ವಿಸ್ತರಣೆಗೆ ಅಗತ್ಯವಿರುವ ಬಂಡವಾಳ ಹಾಗೂ ಇನ್ನಿತರೆ ವೆಚ್ಚಗಳನ್ನು  ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವೇ ಭರಿಸಬೇಕಿದೆ ಎಂದು ಮುಖ್ಯಮಂತ್ರಿ ಕೋರಿದ್ದಾರೆ. ರಾಜ್ಯ ಸರ್ಕಾರ ಮೈಸೂರು ವಿಮಾನ ನಿಲ್ದಾಣದ ರನ್ ವೇ  ವಿಸ್ತರಣೆಗೆ ೨೪೦ ಎಕರೆ ಭೂ ಸ್ವಾಧೀನಕ್ಕೆ ತಗಲುವ ೩೧೯ ಕೋಟಿ ೧೪ ಲಕ್ಷ ರೂಪಾಯಿ ವೆಚ್ಚವನ್ನು ಭರಿಸಿದ್ದು, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವು ವಿಸ್ತರಣೆಯ ಅಂದಾಜು ವೆಚ್ಚ ೧೦೧.೮೪ ಕೋಟಿ ರೂಪಾಯಿಗಳ ಯುಟಿಲಿಟಿ ಸ್ಥಳಾಂತರದ ಯೋಜನೆಯನ್ನು ರೂಪಿಸಿ ಶ್ರೀಘ್ರವಾಗಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಬೇಕೆಂದು ಮುಖ್ಯಮಂತ್ರಿ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

**<><*<><>*><>**

ವಿಧಾನಪರಿಷತ್‌ಗೆ ಕಾಂಗ್ರೆಸ್ ಸದಸ್ಯರ ನಾಮನಿರ್ದೇಶನ ಆಯ್ಕೆ ವಿಚಾರ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಿಗೆ ಬಿಟ್ಟದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಇಂದು ತಿಳಿಸಿದರು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನಾಲ್ಕು ಜನರ ನಾಮನಿರ್ದೇಶನ ಮಾಡಬೇಕಿದೆ. ಇದು ಚುನಾವಣೆ ಅಥವಾ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾಗಬೇಕಿಲ್ಲ.  ಸುಲಭವಾಗಿರುವುದರಿಂದ ಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರು ವರಿಷ್ಠರ ಜೊತೆ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದರು. ರಾಯಚೂರು ನಗರ ಶಾಸಕ ಶಿವರಾಜ್ ಪಾಟೀಲ್ ಅವರ ಲೋಕೇಶನ್ ಪತ್ತೆ ಆರೋಪಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ವಲಯ ಐಜಿಪಿ ಹಾಗೂ ಡಿಜಿಪಿ ಅವರಿಂದ ಮಾಹಿತಿ ಪಡೆಯುವುದಾಗಿ ಪರಮೇಶ್ವರ್ ಅವರು ಹೇಳಿದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯ ಕಾರವಾರದ ನೌಕಾನೆಲೆಗೆ ನಾಳೆ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೧ ಗಂಟೆಗೆ ಐ.ಎನ್.ಎಸ್ ಕದಂಬ ನೌಕಾನೆಲೆಗೆ ಆಗಮಿಸಲಿರುವ ರಕ್ಷಣಾ ಸಚಿವರು, ಇಂಡಿಯನ್ ಓಶಿಯನ್ ಶಿಪ್ 'ಸಾಗರ'ಕ್ಕೆ ಚಾಲನೆ ನೀಡಲಿದ್ದಾರೆ. ನಂತರ ಸೀಬರ್ಡ್ ಪ್ರಾಜೆಕ್ಟ್ ನ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ಭಾರತೀಯ ನಾಕಾದಳದ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಕೊಡಗಿನ ಬಿಜೆಪಿ ಕಾರ್ಯಕರ್ತ ಆತ್ಮಹತ್ಯೆ ಪ್ರಕರಣ ಕುರಿತು ವರದಿ ಆಧರಿಸಿ ಕ್ರಮ ಕೈಗೊಳ್ಳುತ್ತೇವೆಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಬಂದಿದ್ದೆಲ್ಲಾ ಸತ್ಯ ಇರಲ್ಲ. ಪರಿಶೀಲಿಸಿ ಸತ್ಯ ಇದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ. ಪ್ರಕರಣದ ಹಿಂದೆ ಪ್ರಭಾವಿ ವ್ಯಕ್ತಿಗಳಿದ್ದರೆ ಪರಿಶೀಲನೆ ನಡೆಸಲಾಗುವುದು. ವರದಿ ಆಧರಿಸಿ ಕ್ರಮ ತೆಗೆದುಕೊಳ್ಳುತ್ತೇವೆಂದು ಭರವಸೆ ನೀಡಿದ್ದಾರೆ. ಪ್ರಕರಣ ಕುರಿತು ಕೂಲಂಕುಶವಾಗಿ ತನಿಖೆ ನಡೆದು ಸತ್ಯ ಹೊರಬರಬೇಕಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬಿಜೆಪಿ ಕಾರ್ಯಕರ್ತರ ವಿರುದ್ಧ ಅನಗತ್ಯ ಕಿರುಕುಳ, ಒತ್ತಡ, ದೌರ್ಜನ್ಯ ಪ್ರಕರಣ ಹೆಚ್ಚಾಗುತ್ತಿದ್ದು, ಪಾರದರ್ಶಕವಾಗಿ ಪ್ರಕರಣದ ತನಿಖೆ ನಡೆಯಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><*<><>*><

೨೧ ನೇ ರಾಷ್ಟ್ರೀಯ ಜಾನುವಾರು ಗಣತಿಯಲ್ಲಿ ರಾಜ್ಯದಲ್ಲಿ ಶೇಕಡ ೧೦೦ ಗುರಿ ಸಾಧಿಸಿದ ಜಿಲ್ಲೆಗಳ ಪೈಕಿ ಚಿಕ್ಕಬಳ್ಳಾಪುರ ಜಿಲ್ಲೆ ನಾಲ್ಕನೇ ಸ್ಥಾನದಲ್ಲಿದೆ. ಕಳೆದ ಡಿಸೆಂಬರ್ ನಲ್ಲಿ ಆರಂಭವಾದ ಗಣತಿ ಕಾರ್ಯ ಮಾರ್ಚ್ ಅಂತ್ಯದವರೆಗೂ ನಡೆದಿದೆ. ಈ ಬಾರಿ ಸ್ಮಾರ್ಟ್ ಫೋನ್ ಗಳ ಮೂಲಕ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಗಣತಿ ನಡೆಸಲಾಗಿದೆ. ಜಿಲ್ಲೆಯ ೧ ಸಾವಿರದ ೭೩೪ ಗ್ರಾಮಗಳು ಮತ್ತು ವಾರ್ಡ್ ಗಳಲ್ಲಿ ನಡೆದ ಗಣತಿ ಕಾರ್ಯದಲ್ಲಿ ೧೫೦ ಗಣತಿದಾರರು ಮತ್ತು ೪೬ ಮೇಲ್ವಿಚಾರಕರು ಭಾಗವಹಿಸಿದ್ದರು. ಗಣತಿಯ ಎಲ್ಲಾ ವಿವರಗಳನ್ನು ಆನ್ ಲೈನ್ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಪಶು ವೈದ್ಯಕೀಯ ಮತ್ತು ಪಶುಪಾಲನಾ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಡಾ.ರಂಗಪ್ಪ ಮಾಹಿತಿ ನೀಡಿದ್ದಾರೆ.

**ಧ್ವನಿ- ಡಾ. ರಂಗಪ್ಪ ( ೨೬ ಸಕೆಂಡ್ಸ್)**

<><*<><>*><>

ಭಾರತದ ಔಷಧ ಉದ್ಯಮಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ, ಅಮೆರಿಕ ಸರ್ಕಾರವು ಔಷಧ ಉತ್ಪನ್ನಗಳನ್ನು ಸುಂಕದಿಂದ ವಿನಾಯಿತಿ ನೀಡಲು ನಿರ್ಧರಿಸಿದೆ. ಈ ಬೆಳವಣಿಗೆಯನ್ನು ಸ್ವಾಗತಿಸಿರುವ, ಬಯೋಕಾನ್ ಅಧ್ಯಕ್ಷೆ ಕಿರಣ್ ಮಜುಂದಾರ್-ಶಾ ಅವರು ಔಷಧ ವಲಯದ ಮೇಲಿನ ಸಕಾರಾತ್ಮಕ ಪರಿಣಾಮಗಳ ಬಗ್ಗೆ ತಿಳಿಸಿದ್ದಾರೆ. ಭಾರತ ಮತ್ತು ಅಮೆರಿಕ ನಡುವಿನ ಬಲವಾದ ದ್ವಿಪಕ್ಷೀಯ ಸಂಬಂಧವನ್ನು ಹಾಗೂ ಸಾರ್ವಜನಿಕ ಆರೋಗ್ಯವನ್ನು ಹೆಚ್ಚಿಸುವಲ್ಲಿ ಭಾರತೀಯ ಔಷಧ ವಲಯದ ನಿರ್ಣಾಯಕ ಪಾತ್ರ ನಿರ್ಧರಿಸಿರುವ ಔಷಧೀಯ ಉತ್ಪನ್ನಗಳಿಗೆ ಸುಂಕದಿಂದ ವಿನಾಯಿತಿ ನೀಡುವ ಅಮೆರಿಕ ಸರ್ಕಾರದ ನಿರ್ಧಾರವನ್ನು ಸ್ವಾಗತಿಸುವುದಾಗಿ ಅವರು ತಿಳಿಸಿದ್ದಾರೆ. ಜೀವರಕ್ಷಕ ಔಷಧಿಗಳು ಕೈಗೆಟುಕುವಂತೆ ಮಾಡುವುದು ಹಾಗೂ ಲಭ್ಯತೆಯ ಆಧಾರದ ಮೇಲೆ ಒತ್ತು ನೀಡುವುದು ವಿಶೇಷವಾಗಿ ಮುಖ್ಯವಾಗಿದೆ. ೨೦೨೦ ರ

ವೇಳೆಗೆ ನಮ್ಮ ದೇಶಗಳ ನಡುವಿನ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿಯನ್ನು ಹೊಂದಿರುವ ಮಹತ್ವಾಕಾಂಕ್ಷೆಯ ಮಿಷನ್ ೫೦೦ ಯೋಜನೆಯೊಂದಿಗೆ ಹೊಂದಾಣಿಕೆ ಮಾಡಲು ಇದು ಉತ್ತೇಜನಕಾರಿಯಾಗಿದೆ ಎಂದು ಕಿರಣ್ ಹೇಳಿದ್ದಾರೆ.

**<><*<><>*><>**

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಟಿ. ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್. ಕೆ. ವಂಟಿಗೋಡಿ ಅವರಿಂದು ರಾಮನಗರದ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ, ಅಲ್ಲಿನ ಸ್ಥಿತಿ ಗತಿಗಳನ್ನು ಪರಿಶೀಲಿಸಿದರು. ಜಿಲಾಸ್ಪತ್ರೆಯ ಡೇಕೇರ್ ವಿಭಾಗ, ಪ್ರಯೋಗಾಲಯ, ತುರ್ತು ಚಿಕಿತ್ಸಾ ವಿಭಾಗ ಸೇರಿದಂತೆ ಇತರೆ ವಾರ್ಡ್‌ಗಳನ್ನು ಪರಿಶೀಲಿಸಿ, ರೋಗಿಗಳಿಂದು ಕುಂದು ಕೊರತೆ ಆಲಿಸಿದರು. ಈ ಸಂದರ್ಭದಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಆಪ್ತ ಕಾರ್ಯದರ್ಶಿ ಅರುಣ್ ಪೂಜಾರ್, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಮಂಜುನಾಥ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ರೈತರ ಅನುಕೂಲಕ್ಕಾಗಿ ಜಾರಿಗೆ ತಂದಿರುವ ಬೆಳೆ ಸಮೀಕ್ಷೆಯ ಮೊಬೈಲ್ ಆಪ್ ಬಳಸಿ ಬೆಳೆಯ ಮಾದರಿ ದಾಖಲಿಸುವಂತೆ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಹೇಳಿದ್ದಾರೆ. ಬೆಳೆ ಸಮೀಕ್ಷೆ ಕೈಪಿಡಿ ಬಿಡುಗಡೆ ಮಾಡಿ ಮಾತನಾಡಿದ ಅವರು, ರೈತರಿಂದಲೇ ಬೆಳೆ ಸಮೀಕ್ಷೆ ಮಾಡುವ ರೈತಸ್ನೇಹಿ ಕಾರ್ಯಕ್ರಮ ಇದಾಗಿದ್ದು, ಇದರಿಂದ ಬೆಳೆ ಸಾಲ, ಬೆಳೆ ವಿಮೆ, ಬೆಂಬಲ ಬೆಲೆ ಖರೀದಿ, ಪರಿಹಾರ ಮತ್ತು ವಿವಿಧ ಇಲಾಖೆಗಳ ಸೌಲಭ್ಯ ಪಡೆಯಲು ಹಾಗೂ ಪಹಣಿಯಲ್ಲಿ ಬೆಳೆ ವಿವರ ದಾಖಲಿಸಲು ಅನುಕೂಲವಾಗಲಿದೆ ಎಂದರು. ಜಿಲ್ಲಾ ಕೃಷಿ ಜಂಟಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಇಂದು "ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಉದ್ಯೋಗಾವಕಾಶಗಳು" ವಿಷಯದ ಕುರಿತು ಮಾಹಿತಿ ಕಾರ್ಯಾಗಾರ ಜರುಗಿತು. 'ಪರಿಶ್ರಮ ಸಮಗ್ರ ಸೇವಾ ಕೇಂದ್ರ'ದ ನಿರ್ದೇಶಕ ಬಸವರಾಜ್ ಮೇಟಿ ಅವರು ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ಉದ್ಯೋಗಾವಕಾಶಗಳು ಹಾಗೂ ಆಹಾರ ಗುಣಮಟ್ಟ ಪರಿಶೋಧನೆ, ಆಹಾರ ಸುರಕ್ಷತೆ, ಸಂಸ್ಕರಣೆ, ಪ್ಯಾಕೇಜಿಂಗ್, ಮಾರ್ಕೆಟಿಂಗ್ ಸೇರಿದಂತೆ ವಿವಿಧ ಹಂತದ ಹುದ್ದೆಗಳು ಮತ್ತು ಅವುಗಳ ಪ್ರವೇಶಾತಿಗಳ ಕುರಿತು ತಮ್ಮ ಅನುಭವ ಹಂಚಿಕೊಂಡರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ <>*><>**